**aAkashvani : Bangalore**
**National Bulletin In Kannada**
**18.11.2024 / 13.10 hrs**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**18.11.2024 / 13.10 hrs**

**<><*<><>*><>**

ಮುಖ್ಯಾಂಶಗಳು

೧. ಜಿ-೨೦ ಶೃಂಗಸಭೆಯಲ್ಲಿ ಪಾಲ್ಗೊಳ್ಳಲು ಬ್ರೆಜಿಲ್ ತಲುಪಿದ ಪ್ರಧಾನಿ ನರೇಂದ್ರ ಮೋದಿ

೨. ಆಯುಷ್ಮಾನ್ ವಯ ವಂದನಾ ಕಾರ್ಡ್; ೧೦ ಲಕ್ಷಕ್ಕೂ ಹೆಚ್ಚು ಹಿರಿಯ ನಾಗರಿಕರಿಂದ ನೋಂದಣಿ

೩. ಮಹಾರಾಷ್ಟ್ರ, ಜಾರ್ಖಂಡ್ ವಿಧಾನಸಭೆ ಚುನಾವಣೆ; ಬಹಿರಂಗ ಪ್ರಚಾರ ಇಂದು ಅಂತ್ಯ

೪. ಜಿಟಿ ಓಪನ್ ಆರ್ಚರಿ ; ಭಾರತದ ಜ್ಯೋತಿ ಸುರೇಖಾ ವೆನ್ನಮ್‌ಗೆ ಚಿನ್ನ

**<><*<><>*><>**

ಮೂರು ದೇಶಗಳ ಭೇಟಿಯ ಎರಡನೇ ಚರಣದಲ್ಲಿ ಪ್ರಧಾನಿ ಮೋದಿ ಇಂದು ಬ್ರೆಜಿಲ್‌ನ ರಿಯೊ ಡಿ ಜನೈರೊ ತಲುಪಿದ್ದಾರೆ. ಜಿ-೨೦ ಶೃಂಗಸಭೆಯಲ್ಲಿ ಪಾಲ್ಗೊಳ್ಳಲು ಅವರು ಇಲ್ಲಿಗೆ ಆಗಮಿಸಿದ್ದಾರೆ. ಶೃಂಗಸಭೆಯ ನೇಪಥ್ಯದಲ್ಲಿ ಹಲವು ವಿಶ್ವ ನಾಯಕರೊಂದಿಗೆ ಪ್ರಧಾನಿ ಮೋದಿ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ರಿಯೊ ಡಿ ಜನೈರೊ ಗೆ ಆಗಮಿಸಿದ ಅವರಿಗೆ, ಅದ್ದೂರಿ ಸ್ವಾಗತ ಕೋರಲಾಯಿತು. ಇಂದು ಮತ್ತು ನಾಳೆ ನಡೆಯಲಿರುವ ಜಿ-೨೦ ಶೃಂಗಸಭೆಯಲ್ಲಿ ಅಮೆರಿಕ ಅಧ್ಯಕ್ಷ ಜೊ ಬೈಡನ್, ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಸೇರಿದಂತೆ ಹಲವು ನಾಯಕರು ಭಾಗವಹಿಸಲಿದ್ದಾರೆ. ಜಿ-೨೦ ಶೃಂಗಸಭೆಯಲ್ಲಿ ವಿವಿಧ ಜಾಗತಿಕ ಸಮಸ್ಯೆ ಕುರಿತು ಭಾರತದ ನಿಲುವುಗಳನ್ನು ಪ್ರಧಾನಿ ನರೇಂದ್ರ ಮೋದಿ ಅವರು, ಪ್ರಸ್ತುತ ಪಡಿಸಲಿದ್ದಾರೆ. ಈ ವರ್ಷದ ಜಿ-೨೦ ಶೃಂಗಸಭೆಯ ಘೋಷವಾಕ್ಯವು ಒಂದು ನ್ಯಾಯಯುತ ಜಗತ್ತು ಮತ್ತು ಸುಸ್ಥಿರ ಗ್ರಹವನ್ನು ನಿರ್ಮಿಸುವುದು ಆಗಿದೆ. ಇದಕ್ಕೂ ಮುನ್ನ ಪ್ರವಾಸದ ಮೊದಲ ಚರಣದಲ್ಲಿ ನೈಜೀರಿಯಾದ ರಾಜಧಾನಿ ಅಬುಜಾದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು, ನಿನ್ನೆ ನಿಜೀರಿಯಾ ಅಧ್ಯಕ್ಷ ಬೋಲಾ ಅಹ್ಮದ್ ಟಿನುಬು ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಿದರು.

ಭಾರತ ಮತ್ತು ನೈಜೀರಿಯಾ ನಡುವೆ ಕಾರ್ಯತಂತ್ರದ ಪಾಲುದಾರಿಕೆಯನ್ನು ಬಲಗೊಳಿಸುವ ನಿಟ್ಟಿನಲ್ಲಿ ಉಭಯ ನಾಯಕರು ಚರ್ಚಿಸಿದರು. ನಿಯೋಗ ಮಟ್ಟದ ಮಾತುಕತೆ ನಂತರ, ಜಂಟಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ನೈಜೀರಿಯಾದೊಂದಿಗೆ

ಭಾರತ ಉನ್ನತಮಟ್ಟದ ವ್ಯೂಹಾತ್ಮಕ ಪಾಲುದಾರಿಕೆ ಹೊಂದಿದೆ. ರಕ್ಷಣೆ, ಇಂಧನ, ತಂತ್ರಜ್ಞಾನ, ಆರೋಗ್ಯ, ಶಿಕ್ಷಣ ಮತ್ತು ಸಾಂಸ್ಕೃತಿಕ ಕ್ಷೇತ್ರದಲ್ಲಿ ಉಭಯ ದೇಶಗಳು ದ್ವಿಪಕ್ಷೀಯ ಸಂಬಂಧಗಳನ್ನು ಹೊಂದಿವೆ. ಅಲ್ಲದೇ, ಭಯೋತ್ಪಾದನೆ ಮತ್ತು ಕಡಲ್ಗಳ್ಳತನ ಸೇರಿದಂತೆ ವಿವಿಧ ಸವಾಲುಗಳನ್ನು ಎದುರಿಸಲು ಉಭಯ ದೇಶಗಳು ಒಟ್ಟಾಗಿ ಶ್ರಮಿಸುತ್ತಿವೆ ಎಂದು ಹೇಳಿದರು. ಹದಿನೇಳು ವರ್ಷಗಳ ನಂತರ ಭಾರತದ ಪ್ರಧಾನಿಯೊಬ್ಬರು ನೈಜೀರಿಯಾಗೆ ಭೇಟಿ ನೀಡಿದ್ದು, ಇದು ಸಂತಸದ ವಿಷಯವಾಗಿದೆ. ಪ್ರವಾಹ ಸಂತ್ರಸ್ತ ನೈಜೀರಿಯಾಗೆ ೨೦ ಟನ್ ಮಾನವೀಯ ಪರಿಹಾರವನ್ನು ಭಾರತ ಕಳುಹಿಸುತ್ತಿದೆ ಎಂದರು. ಇದೇ ವೇಳೆ ಪ್ರಧಾನಿ ನರೇಂದ್ರ ಮೋದಿ ಅವರಿಗೆ, ನೈಜೀರಿಯಾ ಸರ್ಕಾರವು ಅತ್ಯುನ್ನತ ಗೌರವವಾದ ಗ್ರಾಂಡ್ ಕಮಾಂಡರ್ ಆಫ್ ದಿ ಆರ್ಡರ್ ನೀಡಿ, ಗೌರವಿಸಿತು. ಈ ಗೌರವವನ್ನು ಪ್ರಧಾನಿ ಮೋದಿ ಅವರು, ಭಾರತೀಯರಿಗೆ ಸಮರ್ಪಿಸಿದರು. ಬಳಿಕ ಪ್ರಧಾನಿ ನರೇಂದ್ರ ಮೋದಿ ಅವರು, ನೈಜೀರಿಯಾದಲ್ಲಿರುವ ಭಾರತೀಯ ಸಮುದಾಯವನ್ನು ಉದ್ದೇಶಿಸಿ ಮಾತನಾಡಿದರು.

<><*<><>*><>

ನೂತನವಾಗಿ ಪ್ರಾರಂಭಿಸಲಾದ ಆಯುಷ್ಮಾನ್ ವಯ ವಂದನಾ ಕಾರ್ಡ್ ಅಡಿ ೭೦ ವರ್ಷ ಹಾಗೂ ಅದಕ್ಕಿಂತ ಹೆಚ್ಚಿನ ವಯಸ್ಸಿನ ೧೦ ಲಕ್ಷಕ್ಕೂ ಹೆಚ್ಚು ಹಿರಿಯ ನಾಗರಿಕರು ತಮ್ಮ ಹೆಸರುಗಳನ್ನು ನೋಂದಾಯಿಸಿಕೊಳ್ಳುವ ಮೂಲಕ ಮಹತ್ವದ ಮೈಲಿಗಲ್ಲು ಸಾಧಿಸಲಾಗಿದೆ. ಈ ಕಾರ್ಡ್ ಆಯುಷ್ಮಾನ್ ಭಾರತ್ ಪ್ರಧಾನಮಂತ್ರಿ ಜನ ಆರೋಗ್ಯ ಯೋಜನೆಯಡಿಯಲ್ಲಿ ಉಚಿತ ಆರೋಗ್ಯ ಪ್ರಯೋಜನಗಳನ್ನು ಪಡೆಯಲು ಹಿರಿಯ ನಾಗರಿಕರಿಗೆ ಅನುವು ಮಾಡಿಕೊಡಲಾಗಿದೆ. ಕಳೆದ ಅಕ್ಟೋಬರ್ ೨೯ ರಂದು ಪ್ರಧಾನಿ ನರೇಂದ್ರ ಮೋದಿ ಅವರು, ನೂತನ ಆಯುಷ್ಮಾನ್ ವಯ ವಂದನಾ ಕಾರ್ಡ್ ಕುರಿತು ಘೋಷಿಸಿದರು. ಘೋಷಣೆಯಾದ ಮೂರು ವಾರಗಳಲ್ಲಿ ೧೦ ಲಕ್ಷಕ್ಕೂ ಹೆಚ್ಚು ಹಿರಿಯ ನಾಗರಿಕರು ಇದರಲ್ಲಿ ನೋಂದಾಯಿಸಿಕೊಂಡಿದ್ದು, ಈ ಪೈಕಿ ಸುಮಾರು ೪ ಲಕ್ಷ ಮಹಿಳಾ ಹಿರಿಯ ನಾಗರಿಕರು ಸೇರಿದ್ದಾರೆ. ಯೋಜನೆ ಜಾರಿಯಾದ ನಂತರದಿಂದ ಇಲ್ಲಿಯವರೆಗೆ ೯ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ಚಿಕಿತ್ಸೆ ಒದಗಿಸಲಾಗಿದೆ. ಒಂದು ಸಾವಿರದ ೪೦೦ಕ್ಕೂ ಹೆಚ್ಚು ಮಹಿಳಾ ಹಿರಿಯ ನಾಗರಿಕರು ಸೇರಿದಂತೆ ಒಟ್ಟು ೪ ಸಾವಿರದ ೮೦೦ಕ್ಕೂ ಹೆಚ್ಚು ಹಿರಿಯ ನಾಗರಿಕರು ಇದರ ಪ್ರಯೋಜನ ಪಡೆದಿದ್ದಾರೆ ಎಂದು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮಾಹಿತಿ ನೀಡಿದೆ. ಅನೇಕ ರೋಗಗಳಿಗೆ ಈ ಯೋಜನೆಯಡಿ ಚಿಕಿತ್ಸೆ ಪಡೆಯಬಹುದಾಗಿದೆ. ೭೦ ವರ್ಷಕ್ಕಿಂತ ಹೆಚ್ಚಿನ ವಯೋಮಾನದ ಹಿರಿಯ ನಾಗರಿಕರಿಗೆ ಆರೋಗ್ಯ ವಿಮಾ ರಕ್ಷಣೆಯನ್ನು ಇದು ಒದಗಿಸಲಿದೆ.

<><*<><>*><>

ಮಹಾರಾಷ್ಟ್ರ ವಿಧಾನಸಭೆ ಚುನಾವಣೆ ಹಿನ್ನೆಲೆಯಲ್ಲಿ ಬಹಿರಂಗ ಪ್ರಚಾರಕ್ಕೆ ಇಂದು ಕೊನೆಯ ದಿನವಾಗಿದೆ. ಇದೇ ೨೦ ರಂದು ಮತ ಎಣಿಕೆ ಕಾರ್ಯ ನಡೆಯಲಿದೆ. ೨೮೮ ವಿಧಾನಸಭಾ

ಕ್ಷೇತ್ರಗಳಲ್ಲಿ ೪ ಸಾವಿರದ ೧೩೬ ಅಭ್ಯರ್ಥಿಗಳು ಕಣದಲ್ಲಿದ್ದಾರೆ. ಈ ಪೈಕಿ ೩ ಸಾವಿರದ ೭೭೧ ಪುರುಷ ಅಭ್ಯರ್ಥಿಗಳು ಮತ್ತು ೩೬೩ ಮಹಿಳಾ ಅಭ್ಯರ್ಥಿಗಳಿದ್ದಾರೆ. ಇದೇ ೨೩ ರಂದು ಮತ ಎಣಿಕೆ ಕಾರ್ಯ ನಡೆಯಲಿದೆ. ಇದೇ ವೇಳೆ, ನವಿ ಮುಂಬೈನಲ್ಲಿಂದು ನಡೆಯುವ ಪ್ರಚಾರ ರ್‍ಯಾಲಿಯಲ್ಲಿ ಬಿಜೆಪಿ ಹಿರಿಯ ನಾಯಕ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಭಾಗವಹಿಸುವ ನಿರೀಕ್ಷೆಯಿದೆ. ಗೊಂಡ್ಯ ಮತ್ತು ನಾಗ್ಪುರದಲ್ಲಿ ಕೇಂದ್ರ ಸಚಿವ ನಿತಿನ್ ಗಡ್ಕರಿ ಪಕ್ಷದ ಅಭ್ಯರ್ಥಿಗಳ ಪರ ಪ್ರಚಾರ ನಡೆಸಲಿದ್ದಾರೆ. ಥಾಣೆ, ಸೋಲಾಪುರ ಮತ್ತು ಅಹಮ್ಮದ್ ನಗರದಲ್ಲಿ ನಡೆಯುವ ಸಾರ್ವಜನಿಕ ಸಭೆಗಳನ್ನು ಉದ್ದೇಶಿಸಿ ಬಿಜೆಪಿ ಅಧ್ಯಕ್ಷ ಮತ್ತು ಕೇಂದ್ರ ಸಚಿವ ಜೆ.ಪಿ. ನಡ್ಡಾ, ಮಾತನಾಡಲಿದ್ದಾರೆ. ಇನ್ನೊಂದೆಡೆ ಮುಂಬೈನಲ್ಲಿ ಪಕ್ಷದ ಅಭ್ಯರ್ಥಿಗಳ ಪರ ಕಾಂಗ್ರೆಸ್ ಹಿರಿಯ ನಾಯಕ ರಾಹುಲ್ ಗಾಂಧಿ ಪ್ರಚಾರ ಕೈಗೊಳ್ಳಲಿದ್ದಾರೆ. ಎನ್‌ಸಿಪಿ ಪಕ್ಷದ ಎಸ್‌ಪಿ ಬಣದ ಮುಖ್ಯಸ್ಥ ಶರದ್‌ಪವಾರ್ ಪುಣೆ ಮತ್ತು ಅಹಮ್ಮದ್ ನಗರದಲ್ಲಿ ಮಹಾವಿಕಾಸ್ ಅಘಾಡಿ ಮೈತ್ರಿಕೂಟದ ಅಭ್ಯರ್ಥಿಗಳ ಪರ ಮತಯಾಚಿಸಲಿದ್ದಾರೆ. ಸೊಲ್ಲಾಪುರ ಮತ್ತು ಪುಣೆಯಲ್ಲಿ ಎನ್‌ಸಿಪಿ ನಾಯಕ ಸುಪ್ರಿಯಾ ಸುಳೆ ಪ್ರಚಾರ ರ್‍ಯಾಲಿ ನಡೆಸಲಿದ್ದಾರೆ.

<><*<><>*><>

ಜಾರ್ಖಂಡ್ ವಿಧಾನಸಭೆ ಚುನಾವಣೆಯ ೨ನೇ ಹಂತದ ಮತದಾನ ಇದೇ ೨೦ ರಂದು ನಡೆಯಲಿದೆ. ಬಹಿರಂಗ ಪ್ರಚಾರಕ್ಕೆ ಇಂದು ಕೊನೆಯ ದಿನವಾಗಿದೆ. ವಿವಿಧ ರಾಜಕೀಯ ಪಕ್ಷಗಳ ನಾಯಕರು ಮತದಾರರನ್ನು ಸೆಳೆಯುವ ನಿಟ್ಟಿನಲ್ಲಿ ಪ್ರಚಾರದಲ್ಲಿ ನಿರತರಾಗಿದ್ದಾರೆ. ಜಾರ್ಖಂಡ್ ಮುಕ್ತಿ ಮೋರ್ಚಾ - ಜೆಎಂಎಂ ಪಕ್ಷದ ಹಿರಿಯ ನಾಯಕ ಮತ್ತು ಜಾರ್ಖಂಡ್ ಮುಖ್ಯಮಂತ್ರಿ ಹೇಮಂತ್ ಸೊರೆನ್, ಸಾಹೇಬ್ ಗಂಜ್, ಗೊಡ್ಡ ದುಮ್ಕಾ, ಡಿಯೋಘರ್ ಮತ್ತು ರಾಂಚಿಯಲ್ಲಿ ಚುನಾವಣಾ ರ್‍ಯಾಲಿಗಳನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಬಿಜೆಪಿ ಹಿರಿಯ ನಾಯಕ ಮತ್ತು ಉತ್ತರಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್, ಸಾಹೇಬ್‌ಗಂಜ್, ಜಮ್ತಾರಾ ಮತ್ತು ಡಿಯೋಘರ್‌ನಲ್ಲಿ ಪಕ್ಷದ ಅಭ್ಯರ್ಥಿಗಳ ಪರ ಮತಯಾಚಿಸಲಿದ್ದಾರೆ. ಬರ್ಹೇತ್, ಧನ್‌ಭಾಗ್ ಮತ್ತು ಬೊಕಾರೊದಲ್ಲಿ ಕೇಂದ್ರ ಸಚಿವ ಶಿವರಾಜ್‌ಸಿಂಗ್ ಚೌವ್ಹಾಣ್ ರೋಡ್ ಶೋ ನಡೆಸಲಿದ್ದಾರೆ. ಆರ್‌ಜೆಡಿ ಹಿರಿಯ ನಾಯಕ ತೇಜಸ್ವಿ ಯಾದವ್, ಐಎನ್‌ಡಿಐ ಮೈತ್ರಿಕೂಟದ ಅಭ್ಯರ್ಥಿಗಳ ಪರವಾಗಿ ಪ್ರಚಾರ ನಡೆಸಲಿದ್ದಾರೆ.

<><*<><>*><>

ಎನ್.ಬಿರೇನ್ ಸಿಂಗ್ ನೇತೃತ್ವದ ಮಣಿಪುರ ಸರ್ಕಾರಕ್ಕೆ ನೀಡಿದ್ದ ಬೆಂಬಲವನ್ನು ನ್ಯಾಷನಲ್ ಪೀಪಲ್ಸ್ ಪಾರ್ಟಿ-ಎನ್‌ಪಿಪಿ ಹಿಂಪಡೆದಿದೆ. ಎನ್‌ಪಿಪಿ ರಾಷ್ಟ್ರೀಯ ಅಧ್ಯಕ್ಷ ಕಾನ್ರಾಡ್ ಕೆ. ಸಂಗ್ಮಾ ಅವರು ಈ ನಿರ್ಧಾರದ ಬಗ್ಗೆ ಬಿಜೆಪಿ ಅಧ್ಯಕ್ಷ ಜಗತ್ ಪ್ರಕಾಶ್ ನಡ್ಡಾ ಅವರಿಗೆ ತಿಳಿಸಿದ್ದಾರೆ. ಮಣಿಪುರ ವಿಧಾನಸಭೆಯಲ್ಲಿ ಎನ್‌ಪಿಪಿ ಏಳು ಶಾಸಕರನ್ನು ಹೊಂದಿದೆ. ಬಿಜೆಪಿ ಮೂವತ್ತೆರಡು ಶಾಸಕರನ್ನು ಹೊಂದಿದೆ. ಪ್ರಸ್ತುತ, ಬಿಜೆಪಿಯ ಬಿರೇನ್ ಸಿಂಗ್ ನೇತೃತ್ವದ ಸರ್ಕಾರವು ಎನ್‌ಪಿಎಫ್, ಜೆಡಿಯು, ಮತ್ತು ಸ್ವತಂತ್ರ ಶಾಸಕರ ಬೆಂಬಲ ಹೊಂದಿದೆ. ಮಣಿಪುರದಲ್ಲಿ ಕಾನೂನು ಮತ್ತು ಸುವ್ಯವಸ್ಥೆಯ ಬಗ್ಗೆ

ಎನ್‌ಪಿಪಿ ಕಳವಳ ವ್ಯಕ್ತಪಡಿಸಿದೆ. ಕಳೆದ ಕೆಲವು ದಿನಗಳಲ್ಲಿ ಪರಿಸ್ಥಿತಿ ಮತ್ತಷ್ಟು ಹದಗೆಟ್ಟಿದೆ. ಬಿರೇನ್ ಸಿಂಗ್ ನೇತೃತ್ವದ ಮಣಿಪುರ ಸರ್ಕಾರವು ಬಿಕ್ಕಟ್ಟನ್ನು ಪರಿಹರಿಸಲು ಮತ್ತು ಸಹಜ ಸ್ಥಿತಿಗೆ ಮರಳುವಂತೆ ಮಾಡಲು ಸಂಪೂರ್ಣವಾಗಿ ವಿಫಲವಾಗಿದೆ. ತಕ್ಷಣವೇ ಜಾರಿಗೆ ಬರುವಂತೆ ಎನ್‌ಪಿಪಿ, ಮಣಿಪುರ ಸರ್ಕಾರಕ್ಕೆ ನೀಡಿದ ತನ್ನ ಬೆಂಬಲವನ್ನು ಹಿಂತೆಗೆದುಕೊಳ್ಳಲು ನಿರ್ಧರಿಸಿದೆ ಎಂದು ಕಾನ್ರಾಡ್ ಕೆ. ಸಂಗ್ಮಾ ತಮ್ಮ ಪತ್ರದಲ್ಲಿ ಉಲ್ಲೇಖಿಸಿದ್ದಾರೆ. ಇನ್ನೊಂದೆಡೆ, ನಿನ್ನೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಹಿರಿಯ ಅಧಿಕಾರಿಗಳೊಂದಿಗೆ ಮಣಿಪುರದ ಭದ್ರತಾ ಪರಿಸ್ಥಿತಿಯನ್ನು ಪರಿಶೀಲಿಸಿದ್ದಾರೆ. ಇಂದು ಕೂಡ ಮಣಿಪುರದ ಭದ್ರತೆಗೆ ಸಂಬಂಧಿಸಿದಂತೆ ಕೇಂದ್ರ ಗೃಹ ಸಚಿವರು ಮಹತ್ವದ ಸಭೆ ನಡೆಸಲಿದ್ದಾರೆ.

<><*<><>*><>

ವಿಶ್ವ ಡೊಪಿಂಗ್ ವಿರೋಧಿ ಸಂಸ್ಥೆ - ಡಬ್ಲ್ಯೂಎಡಿಎ ಸಹಯೋಗದೊಂದಿಗೆ ಭಾರತ ನವದೆಹಲಿಯಲ್ಲಿ ನಾಳೆಯಿಂದ ಜಾಗತಿಕ ಕಲಿಕಾ ಮತ್ತು ಅಭಿವೃದ್ಧಿ ಚೌಕಟ್ಟು-ಜಿಎಲ್‌ಡಿಎಫ್ ನಿರ್ವಹಣಾ ತರಬೇತಿ ಕಾರ್ಯಾಗಾರವನ್ನು ಆಯೋಜಿಸಿದೆ. ಡೊಪಿಂಗ್ ವಿರೋಧಿ ಪ್ರಕ್ರಿಯೆಯನ್ನು ಪ್ರಮಾಣೀಕರಿಸಲು, ರಾಷ್ಟ್ರಗಳ ನಡುವೆ ಸಹಕಾರ ಬೆಳೆಸಲು ಹಾಗೂ ಜಾಗತಿಕ ಕ್ರೀಡಾ ಸಮಗ್ರತೆ ಚೌಕಟ್ಟನ್ನು ಬಲಪಡಿಸುವುದು ಈ ನಾಲ್ಕು ದಿನಗಳ ತರಬೇತಿ ಕಾರ್ಯಾಗಾರದ ಉದ್ದೇಶವಾಗಿದೆ. ಈ ಕಾರ್ಯಾಗಾರದಲ್ಲಿ ಮಾಲ್ಡೀವ್ಸ್, ಮ್ಯಾನ್ಮಾರ್, ನೇಪಾಳ, ಮಲೇಷಿಯಾ, ಥೈಲ್ಯಾಂಡ್ ಸೇರಿದಂತೆ ಒಟ್ಟು ೧೦ ರಾಷ್ಟ್ರಗಳಿಂದ ಡೊಪಿಂಗ್ ವಿರೋಧಿ ವೃತ್ತಿಪರರು ಮತ್ತು ತಜ್ಞರು ಹಾಗೂ ಅಂತಾರಾಷ್ಟ್ರೀಯ ಸಂಸ್ಥೆಗಳಾದ ಡಬ್ಲ್ಯೂಎಡಿಎ ಅಥ್ಲೆಟಿಕ್ಸ್ ಸಮಗ್ರತಾ ಘಟಕ-ಎಐಯು ಹಾಗೂ ವಿಶ್ವ ಬ್ಯಾಡ್ಮಿಂಟನ್ ಒಕ್ಕೂಟದ ಪ್ರತಿನಿಧಿಗಳು ಭಾಗವಹಿಸಲಿದ್ದಾರೆ.

<><*<><>*><>

ಅಂತಾರಾಷ್ಟ್ರೀಯ ಹಣಕಾಸು ನಿಧಿ-ಐಎಂಎಫ್ ನ ನಿಯೋಗವೊಂದು ಹಣಕಾಸು ಯೋಜನೆಯ ಮೂರನೇ ಪರಿಶೀಲನೆಗಾಗಿ ಶ್ರೀಲಂಕಾಕ್ಕೆ ಆಗಮಿಸಿದೆ. ಐಎಂಎಫ್‌ನ ಹಿರಿಯ ಯೋಜನಾ ಮುಖ್ಯಸ್ಥ ಪೀಟರ್ ಬ್ರೂಯರ್ ನೇತೃತ್ವದ ತಂಡ, ಶ್ರೀಲಂಕಾದ ಆರ್ಥಿಕ ನೀತಿಗಳು, ಪ್ರಸ್ತುತ ನಡೆಯುತ್ತಿರುವ ಸುಧಾರಣೆಗಳ ಪ್ರಗತಿ ಮತ್ತು ಐಎಂಎಫ್ ನೊಂದಿಗೆ ಈ ಹಿಂದೆ ಮಾಡಿಕೊಂಡಿರುವ ಒಪ್ಪಂದಗಳ ಅನುಷ್ಠಾನ ಕುರಿತು ಮೌಲ್ಯಮಾಪನ ಮಾಡುವ ನಿರೀಕ್ಷೆಯಿದೆ.

<><*<><>*><>

ಲಕ್ಸೆಮ್‌ಬರ್ಗ್‌ನಲ್ಲಿ ನಡೆದ ಜಿಟಿ ಓಪನ್ ಆರ್ಚರಿ ಪಂದ್ಯಾವಳಿಯ ಮಹಿಳೆಯರ ಕಾಂಪೌಂಡ್ ಸ್ಪರ್ಧೆಯಲ್ಲಿ, ಹಾಲಿ ಏಷ್ಯನ್ ಗೇಮ್ಸ್ ಚಾಂಪಿಯನ್ ಜ್ಯೋತಿ ಸುರೇಖಾ ವೆನ್ನಮ್, ಚಿನ್ನದ ಪದಕ ತಮ್ಮದಾಗಿಸಿಕೊಂಡಿದ್ದಾರೆ. ಮೊದಲ ಬಾರಿಗೆ ಜಿಟಿ ಓಪನ್‌ನಲ್ಲಿ ಸ್ಪರ್ಧಿಸಿರುವ ಜ್ಯೋತಿ, ನಿನ್ನೆ ಬೆಲ್ಜಿಯಂನ ಸಾರಾ ಪ್ರೀಲ್ಸ್ ವಿರುದ್ಧ ೧೪೯-೧೪೫ ಅಂಕಗಳ ಅಂತರದಲ್ಲಿ ಜಯ ಗಳಿಸಿ ಪ್ರಶಸ್ತಿಗೆ ಕೊರಳೊಡ್ಡಿದರು. ಇದೇ ವೇಳೆ ಪುರುಷರ ಕಾಂಪೌಂಡ್ ಸ್ಪರ್ಧೆಯಲ್ಲಿ ಅಭಿಷೇಕ್ ಬೆಳ್ಳಿ ಪದಕ

ಗೆದ್ದಿದ್ದಾರೆ. ಫೈನಲ್‌ನಲ್ಲಿ ೧೫೦ ರನ್ ಗಳಿಸಿದ ಹೊರತಾಗಿಯೂ ಅವರು ಸ್ವರ್ಣ ಪದಕ ಗಳಿಸಲು ವಿಫಲರಾದರು. ನೆದರ್ಲೆಂಡ್ಸ್‌ನ ಮೈಕ್ ಸ್ಕ್ಲೋಸರ್ ಅಗ್ರ ಸ್ಥಾನವನ್ನು ಪಡೆದರು.

<><*<><>*><>

ಬಿಹಾರದ ರಾಜ್‌ಗಿರ್‌ನಲ್ಲಿ ನಡೆಯುತ್ತಿರುವ ಮಹಿಳಾ ಏಷಿಯನ್ ಹಾಕಿ ಚಾಂಪಿಯನ್ಸ್ ಟ್ರೋಫಿ ಪಂದ್ಯಾವಳಿಯಲ್ಲಿ ಭಾರತ ತಂಡ ಜಪಾನ್ ವಿರುದ್ಧ ೩-೦ ಗೋಲುಗಳಿಂದ ಭರ್ಜರಿ ಜಯಗಳಿಸಿದೆ. ಈ ಮೂಲಕ ಭಾರತ ಸೆಮಿಫೈನಲ್ಸ್ ಪ್ರವೇಶಿಸಿದೆ. ಭಾರತದ ಪರವಾಗಿ ದೀಪಿಕಾ ೨ ಗೋಲು ಗಳಿಸಿದರೆ, ನವನೀತ್ ಕೌರ್ ೧ ಗೋಲು ಗಳಿಸಿದರು. ಪದಕ ಪಟ್ಟಿಯಲ್ಲಿ ಅತ್ಯಧಿಕ ೧೫ ಅಂಕಗಳೊಂದಿಗೆ ಭಾರತ ಮೊದಲ ಸ್ಥಾನದಲ್ಲಿದೆ.
ಚೀನಾ ೧೨ ಅಂಕಗಳೊಂದಿಗೆ ಎರಡನೇ ಸ್ಥಾನದಲ್ಲಿದೆ.

<><*<><>*><>

ಉತ್ತರಾಖಂಡದ ಚಮೋಲಿ ಜಿಲ್ಲೆಯಲ್ಲಿರುವ ಬದರಿನಾಥ ದೇಗುಲದ ಬಾಗಿಲುಗಳನ್ನು ನಿನ್ನೆ ರಾತ್ರಿ ೯ ಗಂಟೆ ೭ ನಿಮಿಷಕ್ಕೆ ಮುಚ್ಚಲಾಯಿತು. ಚಳಿಗಾಲದ ಹಿನ್ನೆಲೆಯಲ್ಲಿ ದೇಗುಲದ ಬಾಗಿಲುಗಳನ್ನು ಬಂದ್ ಮಾಡಲಾಗಿದೆ. ಈ ಸಂದರ್ಭದಲ್ಲಿ ಬದರಿನಾಥ ದೇವಸ್ಥಾನವನ್ನು ೧೫ ಕ್ವಿಂಟಲ್ ಮಾರಿಗೋಲ್ಡ್ ಹೂವುಗಳಿಂದ ಅಲಂಕರಿಸಲಾಗಿತ್ತು. ದೇಗುಲದ ಸಿಂಹ ದ್ವಾರ ಸಂಕೀರ್ಣದಲ್ಲಿ ಗರ್ವಾಲ್ ಸ್ಕೌಟ್ ಬ್ಯಾಂಡ್‌ನ ಭಕ್ತಿ ರಾಗಗಳೊಂದಿಗೆ ಇಡೀ ಬದರಿನಾಥ್ ಧಾಮ್ ಪ್ರತಿಧ್ವನಿಸಿತು.ವೈದಿಕ ಆಚರಣೆಗಳು ಮತ್ತು ಧಾರ್ಮಿಕ ಸಂಪ್ರದಾಯಗಳೊಂದಿಗೆ ದೇಗುಲದ ಬಾಗಿಲು ಮುಚ್ಚಲಾಯಿತು.

<><*<><>*><>

ಸಿರಿಯಾದ ಬೈರುತ್‌ನಲ್ಲಿರುವ ಬಾತ್ ಪಕ್ಷದ ಕಚೇರಿಯನ್ನು ಗುರಿಯಾಗಿಸಿಕೊಂಡು ಇಸ್ರೇಲ್ ನಡೆಸಿದ ವೈಮಾನಿಕ ದಾಳಿಯಲ್ಲಿ ಹಿಜ್ಬುಲ್ಲಾದ ಮಾಧ್ಯಮ ಮುಖ್ಯಸ್ಥ ಮೊಹಮ್ಮದ್ ಅಫೀಫ್ ಮತ್ತು ಇತರೆ ಮೂವರು ಹತರಾಗಿದ್ದಾರೆ.
ಇಸ್ರೇಲ್‌ನ ಯುದ್ಧ ವಿಮಾನಗಳು, ಕ್ಷಿಪಣಿಗಳು ನಿನ್ನೆ ರಾತ್ರಿ ಬಾತ್ ಪಕ್ಷದ ಕಚೇರಿಯ ಮೇಲೆ ದಾಳಿ ನಡೆಸಿವೆ ಎಂದು ವರದಿಯಾಗಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೨.೩೦ ಕ್ಕೆ